KARNATAK UNIVERSITY, DHARWAD
ACADEMIC (S&T) SECTION
ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ
ವಿದ್ಯಾಮಂಡಳ (ಎಸ್&ಟಿ) ವಿಭಾಗ

ಸ್ವಾತಂತ್ರ್ಯದ ಅಮೃತ ಮಹೋತ್ಸವ

Tele: 0836-2215224
e-mail: academic.st@kud.ac.in
Pavate Nagar,Dharwad-580003
ಪಾವಟೆ ನಗರ, ಧಾರವಾಡ – 580003

NAAC Accredited 'A' Grade 2014

website: kud.ac.in

No. KU/Aca(S&T)/SSL-416/2022-23/ 452 Date: 01-07-2022

## ಸುತ್ತೋಲೆ

ವಿಷಯ: 2022–23ನೇ ಸಾಲಿನ ರಾಷ್ಟ್ರೀಯ ಶಿಕ್ಷಣ ನೀತಿಯಡಿಯಲ್ಲಿ ಎಲ್ಲ ಪದವಿ ತರಗತಿಗಳ 1ನೇ ಸೆಮಿಸ್ಟರ್‌ಗೆ SEC ವಿಷಯವಾದ Digital Fluencyಯನ್ನು ಕಡ್ಡಾಯವಾಗಿ ಆನ್‌ಲೈನ್ ಮುಖಾಂತರ ಬೋಧಿಸಲು ನೋಡಲ್ ಅಧಿಕಾರಿ ನೇಮಕ ಮಾಡುವ ಕುರಿತು.

ಉಲ್ಲೇಖ: 1. ಕಚೇರಿ ಸುತ್ತೋಲೆ ಸಂ. KU/Aca(S&T)/SSL-394A/2022-23/273, ದಿ. 22.06.2022.
2. ಇ–ಮೇಲ್ ಮುಖಾಂತರ ಸಂಪರ್ಕಿಸಿದ ದಿನಾಂಕ 27.06.2022.

------

ಮೇಲ್ಕಾಣಿಸಿದ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ಕರ್ನಾಟಕ ವಿಶ್ವವಿದ್ಯಾಲಯದ ವ್ಯಾಪ್ತಿಯಲ್ಲಿ ಬರುವ ಎಲ್ಲ ಅಧೀನ ಹಾಗೂ ಸಂಲಗ್ನ ಮಹಾವಿದ್ಯಾಲಯಗಳ ಪ್ರಾಚಾರ್ಯರುಗಳಿಗೆ ಈ ಮೂಲಕ ತಿಳಿಯಪಡಿಸುವುದೇನೆಂದರೆ, ಉಲ್ಲೇಖ 01ರ ಪ್ರಕಾರ 2022–23ನೇ ಸಾಲಿನಿಂದ ರಾಷ್ಟ್ರೀಯ ಶಿಕ್ಷಣ ನೀತಿಯಡಿಯಲ್ಲಿ ಜಾರಿಯಲ್ಲಿರುವ ಎಲ್ಲ ಪದವಿ ತರಗತಿಗಳಿಗೆ B.Sc. (ಕಂಪ್ಯೂಟರ್ ಸೈನ್ಸ್) ಮತ್ತು B.C.A ಪದವಿಗಳನ್ನು ಹೊರತುಪಡಿಸಿ ಇತರ ಎಲ್ಲಾ ಪದವಿಗಳ 1ನೇ ಸೆಮಿಸ್ಟರ್‌ಗೆ SEC ವಿಷಯವಾದ Digital Fluencyನ್ನು ಆನ್‌ಲೈನ್ ಮುಖಾಂತರ ಕಡ್ಡಾಯವಾಗಿ ಬೋಧಿಸಲು ಕ್ರಮಕೈಗೊಳ್ಳಬೇಕೆಂದು ನಿರ್ದೇಶಿಸುತ್ತಾ, ಉಲ್ಲೇಖ 02ರ ಪ್ರಕಾರ ನೋಡಲ್ ಅಧಿಕಾರಿಗಳನ್ನು **Google Form** ಮುಖಾಂತರ ನೇಮಿಸಲು ಮಿಂಚಂಚೆ (ಇ–ಮೇಲ್ **sec@kud.ac.in**) ಮೂಲಕ ಎಲ್ಲ ಮಹಾವಿದ್ಯಾಲಯಗಳ ಪ್ರಾಚಾರ್ಯರುಗಳಿಗೆ ತಿಳಿಯಪಡಿಸಲಾಗಿತ್ತು.

ಆದರೆ, ಇಲ್ಲಿಯವರೆಗೂ ಕೇವಲ 85 ಮಹಾವಿದ್ಯಾಲಯಗಳು ಮಾತ್ರ ನೋಡಲ್ ಅಧಿಕಾರಿಗಳನ್ನು ನೇಮಿಸಿರುತ್ತಾರೆ. ಉಳಿದ ಮಹಾವಿದ್ಯಾಲಯಗಳ ಪ್ರಾಚಾರ್ಯರು ಕೂಡಲೇ **Google Form** ಮುಖಾಂತರ ದಿನಾಂಕ **02.07.2022** ರೊಳಗಾಗಿ ನೋಡಲ್ ಅಧಿಕಾರಿಗಳನ್ನು ನೇಮಿಸಲು ಶೀಘ್ರವಾಗಿ ಕ್ರಮಕೈಗೊಳ್ಳಲು ತಿಳಿಸಲಾಗಿದೆ. ನೋಡಲ್ ಅಧಿಕಾರಿಗಳನ್ನು ನೇಮಿಸದಿದ್ದರೆ ತಮ್ಮ ಮಹಾವಿದ್ಯಾಲಯಗಳ ವಿದ್ಯಾರ್ಥಿಗಳು Digital Fluencyನ್ನು ಕಲಿಯಲು ಸಾಧ್ಯವಾಗುವುದಿಲ್ಲ. ಮುಂದಿನ ಅಡಚಣೆಗಳಿಗೆ ಸಂಬಂಧಪಟ್ಟ ಮಹಾವಿದ್ಯಾಲಯಗಳ ಪ್ರಾಚಾರ್ಯರು ಹೊಣೆಗಾರರೆಂದು ಈ ಮೂಲಕ ತಿಳಿಯಪಡಿಸಿದೆ. ಹೆಚ್ಚಿನ ವಿವರಕ್ಕಾಗಿ ಡಾ. ಎಸ್.ಎಂ.ತುವಾರ, ಮುಖ್ಯ ನೋಡಲ್ ಅಧಿಕಾರಿಗಳು, KUD NASSCOM ಘಟಕ, ಇವರನ್ನು ಮಿಂಚಂಚೆ ಮೂಲಕ (**sec@kud.ac.in**) ಸಂಪರ್ಕಿಸಬಹುದು.

Google Form for Registration of Nodel Officer - https://forms.gle/t89eb5GVXs75u1ZLA

01/07
ಕುಲಸಚಿವರು

ಗೆ,

1. ಕರ್ನಾಟಕ ವಿಶ್ವವಿದ್ಯಾಲಯದ ವ್ಯಾಪ್ತಿಯಲ್ಲಿ ಬರುವ ಎಲ್ಲ ಅಧೀನ ಹಾಗೂ ಸಂಲಗ್ನ ಮಹಾವಿದ್ಯಾಲಯಗಳ ಪ್ರಾಚಾರ್ಯರುಗಳಿಗೆ.
2. ಕುಲಸಚಿವರು (ಮೌಲ್ಯಮಾಪನ), ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.

**ಪ್ರತಿ:**

1. ನಿರ್ದೇಶಕರು, ಕಾಲೇಜು ಅಭಿವೃದ್ಧಿ ವಿಭಾಗ, ಕ.ವಿ.ವಿ. ಧಾರವಾಡ.
2. ನೋಡಲ್ ಅಧಿಕಾರಿಗಳು, UUCMS ಘಟಕ ಕ.ವಿ.ವಿ. ಧಾರವಾಡ.
3. ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ಕ.ವಿ.ವಿ. ಧಾರವಾಡ.
4. ಕುಲಸಚಿವರ ಆಪ್ತ ಕಾರ್ಯದರ್ಶಿಗಳು, ಕ.ವಿ.ವಿ. ಧಾರವಾಡ.
5. ಕುಲಸಚಿವರು (ಮೌಲ್ಯಮಾಪನ) ಆಪ್ತ ಕಾರ್ಯದರ್ಶಿಗಳು, ಕ.ವಿ.ವಿ. ಧಾರವಾಡ.
6. ನಿರ್ದೇಶಕರು, ಐ.ಟಿ. ಶಾಖೆ, ಪರೀಕ್ಷಾ ವಿಭಾಗ, ಕ.ವಿ.ವಿ. ಧಾರವಾಡ ಇವರಿಗೆ ಕ.ವಿ.ವಿ. ಅಂತರ್ಜಾಲ ಮುಖಾಂತರ ಬಿತ್ತರಿಸಲು ಕ್ರಮವಹಿಸುವುದು.